# ಮಹಿಳೆಯರಿಗೆ ಪ್ರಪ್ರಥಮ ಸಮಾನತೆ ನೀಡಿದ್ದು ಅಣ್ಣ ಬಸವಣ್ಣನವರು : ಗಿರಿಜಕ್ಕ ಧರ್ಮರಡ್ಡಿ



ಗದಗ: ಗದಗ ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿ ಆಶ್ರಯದಲ್ಲಿ ಏರ್ಪಡಿಸಿದ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ನಗರದ ಪ್ರಖ್ಯಾತ ಪ್ರವಚನಕಾರರಾದ ಶ್ರೀಮತಿ ಗಿರಿಜಕ್ಕೆ ಧರ್ಮರಡ್ಡಿ ಇವರು ಜ್ಯೋತಿ ಬೆಳಗಿಸುವುದರೊಂದಿಗೆ ಉದ್ಘಾಟಿಸಿ ಸಮಿತಿಯವರು ನೀಡಿದ ಸನ್ಮಾನಕ್ಕೆ ಪ್ರತಿಯಾಗಿ ಮಾತನಾಡಿ, ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ವಿಶೇಷವಾಗಿ ಆಚರಿಸಿ ಸಂಭ್ರಮಿಸುತ್ತಿರುವುದು ಸಂತೋಷ. ಆದ್ರೆ ನಮಗೆಲ್ಲ ಸ್ವಾತಂತ್ರ್ಯ, ಹಕ್ಕು, ಸಮಾನತೆಯನ್ನು ವಿಶ್ವಗುರು ಬಸವಣ್ಣವರು ನಮಗೆ ಅಂದೇ ಕೊಟ್ಟಾಗಿದೆ. ಅಂದಿನಂದ ನಾವುಗಳು ಹೆಮ್ಮೆಯಿಂದ ಅನುಭವಿಸುತ್ತಿದ್ದೇವೆ ಎಂದು ವಿವರಿಸುವುದರೊಂದಿಗೆ ಅನೇಕ ಉದಾಹರಣೆಯನ್ನು ಕೊಡುತ್ತಾ ಮಾರ್ಮಿಕವಗಿ ಮಾತನಾಡಿದರು.

ಶಾರದಾ ಹಚಡದ ಇತ್ತೀಚೆಗಷ್ಟೆ ನವೃತ್ತಗೊಂಡ ಅಂಗನವಾಡಿ ಶಿಕ್ಷಕಿಯವರು ಸನ್ಮಾನಕ್ಕೆ ಪ್ರತಿಯಾಗಿ ಮಾತನಾಡುತ್ತಾ ಮಕ್ಕಳಿಗೆ ಮನೆಯಲ್ಲಿಯ ಸಂಸ್ಕೃತಿ ಮುಖ್ಯವಾಗುತ್ತೆ. ಮಕ್ಕಳಿಗೆ ಒಳ್ಳೆಯ ಸಂಸ್ಕಾರ ದೊರೆತರೆ ಒಳ್ಳೆಯ ಪ್ರಜೆಗಳಾಗುತ್ತಾರೆ. ಮಕ್ಕಳನ್ನು ತಿದ್ದಿ ಮೂರ್ತಿ ಮಾಡುವ ಕೆಲಸ ಶಿಕ್ಷಕರದ್ದು ಆಗಿರುತ್ತದೆ ಎಂದು ನುಡಿದರು.

ಗದಗ ಜಿಲ್ಲಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿಗಳಾದ ಆಂಜನೇಶ ಮಾನೆ ಮಾನಾಡುತ್ತಾ ಮಹಿಳೆಯರ ವ್ಯಕ್ತಿತ್ವ ಕುರಿತು ತಿಳಿಸುತ್ತಾ ಧ್ಯಾನದ ಮಹತ್ವ ವಿವರಿಸಿದರು.ಪತಂಜಲಿ ಯೋಗ ಸಮಿತಿ ಖಜಾಂಚಿಗಳಾದ ಕೆ.ಎಸ್.ಗುಗ್ಗರಿಯವರು ಮಾತನಾಡಿ ಮಹಿಳಾ ದಿನಾಚರಣೆ ಅಂತರಾಷ್ಟ್ರೀಯ ಮಟ್ಟದಲ್ಲಿ ಆಚರಿಸುವುದರ ಬಗ್ಗೆ ವಿವರಿಸದರು.ಹಿರಿಯ ಯೋಗ ಶಿಕ್ಷಕಿ ಬಸಮ್ಮ ಡಗಲಿ ಮಾತನಾಡಿ ಮಹಿಳೆಯರು ಯಾವ ಕ್ಷೇತ್ರದಲ್ಲಿಯೂ ಹಿಂದೆ ಇಲ್ಲ. ತೊಟ್ಟಿಲು ತೂಗೂವ ಕೈ ಜಗತ್ತನೇತೂಗಬಲ್ಲದು ಎಂದು ಉದಾಹರಣೆಯೊಂದಿಗೆ ಮಾತನಾಡಿದರು. ಅಧ್ಯಕ್ಷತೆ ವಹಸಿದ್ದ ಗದಗ ಜಿಲ್ಲಾ ಮಹಿಳಾ ಪತಂಜಲಿ ಯೋಗ ಸಮಿತಿ ಜಿಲ್ಲಾ ಪ್ರಭಾರಿಗಳಾದ ಶೋಭಾ ಗುಗ್ಗರಿ ಮಾತನಾಡಿ ನಾವು ಮಹಿಳೆಯರು ನಮ್ಮ ಜವಾಬ್ದಾರಿಗಳು ಹೆಚ್ಚಾಗಿ ಇರುತ್ತವೆ. ಮನೆಯ ಜವಾಬ್ದಾರಿಯೊಂದಿಗೆ ಸಮಾಜ ಮುಖಿಗಳಾಗಿ ಸೇವೆ ಸಲ್ಲಿಸಬೇಕೆಂದರು.ಮಹಿಳಾ ಪತಂಜಲಿ ಯೋಗ ಸಮಿತಿಯಿಂದ ವರದಾನೇಶ್ವರಿ ಮಹಿಳಾ ಸಮಿತಿಯ ಶೈಲಾ ಖೋಡೆಕಲ್ ಹಾಗೂ ಸುರೇಖಾ ಪಿಳ್ಳಿಯವರನ್ನು ಶಾಲು ಹೊದಿಸಿ ಸನ್ಮಾನಸಲಾಯಿತು.

ಈ ಸಂದರ್ಭದಲ್ಲಿ ಮುನಸಿಪಲ್ ಮೈದಾನದ ಕಕ್ಷೆಯವರು ಯೋಗಾಸನಗಳನ್ನೊಳಗೊಂಡ ನೃತ್ಯ ಪ್ರದರ್ಶನ ಮಾಡಿದರು. ನಾಗರತ್ನಾ ಬಡಿಗಣ್ಣವರ ಹಾಗೂ ಮಧು ಕೋಟಿಯವರು ಹೆಣ್ಣಿಗೆ ಸಾರ್ಥಕತೆ ಬರುವುದು ತಾಯಿಯಾದಾಗಲೇ ಎಂಬ ಅಂಶವನ್ನು ಗಮನದಲ್ಲಿಟ್ಟುಕೊಂಡು ಬವಿಕೆ ಹಾಡಿಗೆ ಪ್ರಾತ್ಯಕ್ಷಿಕೆಯೊಂದಿಗೆ ಅತ್ಯುತ್ತಮ ನೃತ್ಯ ಪ್ರದರ್ಶನ ಮಾಡಿ ಎಲ್ಲರ ಮನ ಸೂರೆಗೊಂಡರು. ಬಿ.ಪಿ ಹಾಗೂ ಸುಗರ್‌ಗೆ ಸಂಬಂದಿಸಿದಂತೆರ ಬ್ರಹ್ಮಕುಮಾರಿ ಈಶ್ವರಿಯು ವಿಶ್ವವಿದ್ಯಾಲಯದ ಕಕ್ಷೆಯವರು ನೃತ್ಯ ಪ್ರದರ್ಶನ ಮಾಡಿದರು. ಸ.ಹಿ.ಪ್ರಾ.ಶಾಲೆ ನಂ.4 ಕಕ್ಷೆಯವರು ಅತ್ಯುತ್ತಮ ನೃತ್ಯ ಪ್ರದರ್ಶನದೊಂದಿಗೆ ಜಾನಪದ ಹಾಡನ್ನು ಜಾನಪದ ಕಟ್ಟಯಲ್ಲಿ ಹಾಡಿದರು. ಸುಧಾ ಕೆರೂರ ತಂಡದವರು ಸಹ ಅತ್ಯುತ್ತದ ನೃತ್ಯ ಪ್ರದರ್ಶನ ಮಾಡಿದರು.

ಮಹಿಳಾ ಕಾರ್ಯದರ್ಶಿ ನಾಗರತ್ನಾ ಬಡಿಗಣ್ಣವರ ಶೋಭಾ ಗುಗ್ಗರಿಯವರ ಸೇವೆಯನ್ನು ಮೆಚ್ಚಿ ಸ್ವಸಂತೋಃದಿಂದ ಶಾಲು ಹೊದಿಸಿ ನೆನಪಿನ ಕಾಣಿಕೆ ನೀಡುವುದರೊಂದಿಗೆ ಅವರನ್ನು ಗೌರವಿಸಿದರು. ಅತ್ಯುತ್ತಮ ಯೋಗ ಗೀತೆಯನ್ನು ರಚಿಸಿ ಯೋಗಕ್ಕೆ ನೀಡಿದ ಸದಾನಂದ ಕಾಮತ ಇವರನ್ನು ಗೌರವಿಸಲಾಯಿತು.

ಪ್ರಾರಂಭದಲ್ಲಿ ಸುರೇಖಾ ಪಿಳ್ಳಿ ಪ್ರಾರ್ಥಿಸಿ ಸರ್ವರನ್ನು ಸ್ವಾಗತಿಸಿ ಪರಿಚಯಿಸಿದರು. ಅತಿಥಿ ಮಹೋದರರಿಗೆ ಪುರ್ಷ್ಪಾಣೆ ಜರುಗಿತು. ರತ್ನಾ ಬಡಿಗಣ್ಣವರ ಕಾರ್ಯಕ್ರಮ ನರೂಪಿಸಿ ಕೊನೆಯಲ್ಲಿ ವಂದಿಸಿದರು. ಗದಗದಲ್ಲಿಯ ವಿವಿಧ ಯೋಗ ಕಕ್ಷೆಗಳಿಂದ ಎಲ್ಲ ಯೋಗ ಸಾಧಕರು ಆಗಮಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು

# ಭೋವಿ ಸಮಾಜದ ರಾಜ್ಯ ಯುವ ಘಟಕ ಕಾರ್ಯದರ್ಶಿಯಾಗಿ ರಾಮು ಪೂಜಾರ ಆಯ್ಕೆ



ಕೊಪ್ಪಳ 26:–ಕರ್ನಾಟಕ ರಾಜ್ಯ ಭೋವಿ ಮಹಾಸಭೆ ರಾಜ್ಯ ಯುವ ಘಟಕ ಕಾರ್ಯದರ್ಶಿಯಾಗಿ ಕೊಪ್ಪಳ ನಗರದ ರಾಮು ಪೂಜಾರ ಅವರನ್ನು ನೇಮಕ ಮಾಡಲಾಗಿದೆ.

ಇವರು ಸುಮಾರು ವರ್ಷಗಳಿಂದ ಸಮಾಜದ ಸಂಘಟನೆ, ಸಮಾಜ ಸೇವೆ ಹಾಗೂ ಅಭಿನವ ನ್ಯೂ ಡ್ಯಾನ್ಸ್ ಅಕಾಡೆಮಿ. ಸಂಸ್ಥೆಯ ನೃತ್ಯ ಸಂಯೋಜಕರಾಗಿ ಕಾರ್ಯ ನರವಹಿಸುತಿದ್ದು ಇವರಿಗೆ ರಾಜ್ಯ ಪ್ರಶಸ್ತಿ ಜೊತೆಗೆ ಹಲವು ಪ್ರಶಸ್ತಿಗಳು ಲಭಿಸಿವೆ.

ರಾಮು ಪೂಜಾರ ಅವರನ್ನು ಕರ್ನಾಟಕ ರಾಜ್ಯ ಭೋವಿ ಮಹಾಸಭೆಗೆ ನೇಮಕ ಮಾಡಿ ಸಂಸ್ಥಾಪಕರಾದ ಆರ್.ಮುನರಾಜ ಮತ್ತು ಯುವ ಘಟಕ ರಾಜ್ಯಧ್ಯಕ್ಷರಾದ ವೈ ಶಂಕರ.ಯ ನೇಮಕ ಮಾಡಿದ ಆದೇಶ ಪತ್ರ ನೀಡಿದ್ದು.

ರಾಮು ಪೂಜಾರ ಕೊಪ್ಪಳ ನಗರದ ಭೋವಿ ಸಮಾಜದ ಸಂಘಟನೆಯಲ್ಲಿ, ಕಲ್ಯಾಣ ಕರ್ನಾಟಕ ಮಾಧ್ಯಮ ಪ್ರತಿನಧಿಯಾಗಿ ಕಾರ್ಯನರ್ವಹಿಸಿದ್ದು. ರಾಜ್ಯ ಸಮಾಜದ ಸಂಘಟನೆಗಾಗಿ ರಾಜ್ಯದ ಯುವ ಘಟಕ ಕಾರ್ಯಗಳನ್ನು ಸುಸಂಬದ್ಧವಾಗಿ ಭೋವಿ ಸಮಾಜಕ್ಕೆ ಶ್ರಮಿಸಿದ ಇವರನ್ನು ನೇಮಕ ಮಾಡಲಾಗಿದೆ ಎಂದು ರಾಜ್ಯಾಧ್ಯಕ್ಷರು ತಿಳಿಸಿದರು.

# ಜಿಲ್ಲಾಡಳಿತ ಭವನದಲ್ಲಿ ಯೋಗಿ ನಾರೇಯಣ ಯತೀಂದ್ರ (ಕೈವಾರ ತಾತಯ್ಯ) ಜಯಂತಿ



ಗದಗ ಮಾರ್ಚ 25: ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಸೋಮವಾರದಂದು ಯೋಗಿ ನಾರೇಯಣ ಯತೀಂದ್ರ ( ಕೈವಾರ ತಾತಯ್ಯ )ಜಯಂತಿ ಅಂಗವಾಗಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ಯೋಗಿ ನಾರೇಯಣ ( ಕೈವಾರ ತಾತಯ್ಯ) ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನರ್ದೇಶಕ ವೀರಯ್ಯ ಸ್ವಾಮಿ, ವಾರ್ತಾಧಿಕಾರಿ ವಸಂತ ಮಡ್ಲೂರ, ನರ್ಮಿತಿ ಕೇಂದ್ರದ ವ್ಯವಸ್ಥಾಪಕ ನರ್ದೇಶಕ ಗಂಗಾಧರ ಶಿರೋಳ, ಜಿಲ್ಲಾಧಿಕಾರಿಗಳ ಕಚೇರಿಯ ಶಿರಸ್ತೇದಾರರಾದ ಮಹೇಶ ಕರಡಿಗುಡ್ಡ, ಶಶಿಕಲಾ ದೊಡ್ಡವಾಡಮಠ, ಸೇರಿದಂತೆ ವೀರಣ್ಣ ಮಠಪತಿ, ವಿನಾಯಕ ಬಾವಿಮನಿ, ಮಲ್ಲಿಕಾರ್ಜುನ ಪೂಜಾರ ಹಾಜರಿದ್ದರು.

# ಜೂನ ಅಂತ್ಯದವರೆಗೂ ಡ.ಸ.ಹಡಗಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೆಲಸ ಕೊಡೋಣ: ಪಿಡಿಓ ಈಶ್ವರಗೌಡ ಪಾಟೀಲ




ರೋಣ: ಈ ಬಾರಿ ಬರಗಾಲದ ಛಾಯೆ ಆವರಿಸಿದೆ, ಈ ಹಿನ್ನೆಲೆ ದುಡಿಯುವ ವರ್ಗಕ್ಕೆ ಮಳೆ ಇಲ್ಲದೆ, ಬೆಳೆ ಕೂಡ ಇಲ್ಲಾ, ಹೀಗಾಗಿ ಡ.ಸ ಹಡಗಲಿ ಗ್ರಾಮ ಪಂಚಾಯುತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಜೂನ ಅಂತ್ಯದ ವರೆಗೂ ಕೆಲಸ ಕೊಡೋಣ ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಈಶ್ವರಗೌಡ ಪಾಟೀಲ ಹೇಳಿದರು. ರೋಣ ತಾಲೂಕಿನ ಡ.ಸ.ಹಡಗಲಿ ಗ್ರಾಮ ಪಂಚಾಯತಿ ಯಲ್ಲಿ ಕಾಯಕ ಬಂಧುಗಳ ಸಭೆಯಲ್ಲಿ ಮಾತನಾಡಿದ ಅವರು, ದುಡಿಯುವ ವರ್ಗಕ್ಕೆ ಕೆಲಸ ಕೊಡುವ ಮೂಲಕ ಅತಿ ಹೆಚ್ಚು ಮಾನವ ದಿನಗಳ ಸೃಜನೆ ಮಾಡುವ ಗುರಿಯನ್ನು ಹೊಂದೊಣ. ಈ ಹಿನ್ನಲೆ ತಾವೆಲ್ಲರೂ ಶ್ರಮ ವಹಿಸಿ ಪ್ರಾಮಾಣಿಕತೆಯಿಂದ ಕೆಲಸ ಮಾಡಿ ಎಂದು ಹೇಳಿದರು.

ಪ್ರತಿ ಸೋಮವಾರ ಕೆಲಸದ ಬೇಡಿಕೆ ಸಲ್ಲಿಸಿದ ಕೂಲಿಕಾರರ ವಿವರಗಳನ್ನು ಎಂ.ಐ.ಎಸ್.ನಲ್ಲಿ ದಾಖಲಿಸುವುದು, ಮತ್ತು ಎರಡು ದಿನಗಳೊಳಗೆ ಕೆಲಸವನ್ನು ಒದಗಿಸುವದು ನಮ್ಮ ಕೆಲಸ. ಕೆಲಸದ ಸ್ಥಳದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ನೆರಳಿನ ವ್ಯವಸ್ಥೆ ಮಾಡುವದು ಸಿಬ್ಬಂದಿಗಳ ಕೆಲಸ ತಪ್ಪದೇ ಮಾಡಿ ಎಂದರು.ಈ ಮೊದಲ ಮಕ್ಕಳಿಗೆ ಸರಿಯಾದ ಸೌಲಭ್ಯಗಳು ಇಲ್ಲದೇ ಇರುವ ಕಾರಣ ಮಕ್ಕಳಿಗೆ ಸ್ವಲ್ಪ ತೊಂದರೆ ಆಗುತ್ತಿತ್ತು, ಈ ಬಾರಿ ಗ್ರಾಮದಲ್ಲಿ ಕೂಸಿನ ಮನೆಯನ್ನು ತೆರಯಲಾಗಿದ್ದು ಪಾಲಕರಿಗೆ ಮಕ್ಕಳನ್ನು ಅಲ್ಲಿ ಬಿಟ್ಟು ಹೋಗಲು ತಿಳಿಸುವ ಕೆಲಸ ಮಾಡಿ ಈ ಹಿನ್ನೆಲೆ ನಮ್ಮ ಸಹಕಾರ ಮುಖ್ಯ ಎಂದರು.

ಎನ್‌ಎಂಎಂಎಸ್ ಆ?ಯಪ್ ಬಗ್ಗೆ ಮಾಹಿತಿ ನೀಡಿ ಕಾಯಕ ಬಂಧುಗಳು ಎನ್‌ಎಂಎಂಎಸ್ ಆ?ಯಪ್‌ನ ಮೂಲಕ ಹಾಜರಾತಿ ಹಾಕಿ, ಕೆಲಸದಲ್ಲಿ ಯಾವುದೇ ರೀತಿಯ ವಿಳಂಬವಾಗುದಂತೆ ನೋಡಿಕೊಳ್ಳಬೇಕು. ಪ್ರತಿ ಕೂಲಿಗಾರರಿಗೆ ನರೇಗಾ ಕೂಲಿ ಯೋಜನೆಯಡಿ ?316 ಇದೆ ಹಾಗಾಗಿ ಜನರಿಗೆ ತಿಳಿವಳಿಕೆ ನೀಡುವುದು ಅವರನ್ನು ಹೆಚ್ಚು ಹೆಚ್ಚು ಕೆಲಸಕ್ಕೆ ಬರುವ ಹಾಗೆ ಮಾಡುವ ಜವಾಬ್ದಾರಿ ನಮ್ಮದಾಗಿರುತ್ತದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಕಾರ್ಯದರ್ಶಿ ಬಸವರಾಜ ತಳವಾರ, ಐಇಸಿ ಮಂಜುನಾಥ, ಬಿ ಎಫ್ ಟಿ ಪ್ರಕಾಶ ಅಂಬಕ್ಕಿ ಹಾಗೂ ಡ.ಸ.ಹಡಗಲಿ ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು ಹಾಜರಿದ್ದರು.

# ನಿರ್ಮಲಾ ಸೀತಾರಾಮನ್ ಅವರ ಯಜಮಾನಿಕೆಯ ಧೋರಣೆ ಅತ್ಯಂತ ಖಂಡನೀಯ

ಬೆಂಗಳೂರು ; ರಾಜ್ಯ ಸರ್ಕಾರದ ಯೋಜನೆಗಳಿಗೆ ಅವರೇ ಹಣ ಹೊಂದಿಸಿಕೊಳ್ಳಬೇಕು, ಕೇಂದ್ರ ಸರ್ಕಾರವನ್ನು ಕೇಳಬಾರದು ಎನ್ನುವ ನರ್ಮಲಾ ಸೀತಾರಾಮನ್ ಅವರ ಯಜಮಾನಿಕೆಯ ಧೋರಣೆ ಅತ್ಯಂತ ಖಂಡನೀಯ, ಈ ಹೇಳಿಕೆ ಆರುವರೆ ಕೋಟಿ ಕನ್ನಡಿಗರಿಗೆ ತೋರಿರುವ ಅಗೌರವ ಮತ್ತು ಮಾಡಿರುವ ಅವಮಾನ ಎಂದು ತಿಳಿದುಕೊಳ್ಳಬೇಕಾಗುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಪ್ರಕಟಣೆಯನ್ನು ನೀಡಿರುವ ಅವರು ಶತಾಯಗತಾಯ ರಾಜ್ಯದಲ್ಲಿ ಆರ್ಥಿಕ ಬಿಕ್ಕಟ್ಟನ್ನು ಸೃಷ್ಟಿಸಿ ಬಡವರಿಗೆ ನೀಡಲಾಗಿರುವ ಗ್ಯಾರಂಟಿ ಯೋಜನೆಗಳು ಸ್ಥಗಿತಗೊಳ್ಳುವಂತೆ ಮಾಡಬೇಕೆಂಬ ದುರಾಲೋಚನೆ ಕೇಂದ್ರ ಸರ್ಕಾರಕ್ಕೆ ಇದೆ ಎನ್ನುವುದು ಕನ್ನಡಿಗರಿಗೆ ಈಗ ಅರ್ಥವಾಗಿದೆ. ಇದಕ್ಕೆ ತಕ್ಕ ಉತ್ತರವನ್ನು ರಾಜ್ಯದ ಮತದಾರರು ಲೋಕಸಭಾ ಚುನಾವಣೆಯಲ್ಲಿ ನೀಡಲಿದ್ದಾರೆ ಎಂದಿರುವ ಅವರು

ಶ್ರೀಮತಿ ನರ್ಮಲಾ ಸೀತಾರಾಮನ್ ಅವರೇ, ನಾವು ನಮ್ಮ ಗ್ಯಾರಂಟಿ ಯೋಜನೆಗಳಿಗೆ ವಿಶೇಷವಾದ ಅನುದಾನ ಕೊಡಿ ಎಂದು ಕೇಂದ್ರ ಸರ್ಕಾರವನ್ನು ಬೇಡಿಕೊಳ್ಳುತ್ತಿಲ್ಲ, ಈ ಯೋಜನೆಗಳಿಗೆ ಬೇಕಿರುವ ಅನುದಾನವನ್ನು ಬಜೆಟ್ ನಲ್ಲೇ ಮೀಸಲಿಟ್ಟಿದ್ದೇವೆ.

ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯದ ವಿರುದ್ದ ಸಿಡಿದೆದ್ದಿರುವ ಕನ್ನಡಿಗರ ಕೂಗಿಗೆ ರಾಜ್ಯ ಸರ್ಕಾರ ದನಿಯಾಗಿದೆ, ಇದು ಜವಾಬ್ದಾರಿಯುತ ಸರ್ಕಾರದ ಕರ್ತವ್ಯವೂ ಹೌದು. ಅನ್ಯಾಯ ನಡೆದಿರುವ ಕಾರಣಕ್ಕಾಗಿಯೇ 2020–21ರಲ್ಲಿ 15ನೇ ಹಣಕಾಸು ಆಯೋಗವು ತನ್ನ ಮಧ್ಯಂತರ ವರದಿಯಲ್ಲಿ ಕರ್ನಾಟಕವೂ ಸೇರಿದಂತೆ 3 ರಾಜ್ಯಗಳಿಗೆ ವಿಶೇಷ ಅನುದಾನ ? 6,764 ಕೋಟಿ (ರಾಜ್ಯಕ್ಕೆ ?5,495 ಕೋಟಿ, ತೆಲಂಗಾಣಕ್ಕೆ ?723 ಕೋಟಿ ಹಾಗೂ ಮಿಜೋರಾಂಗೆ ?546 ಕೋಟಿ) ಶಿಫಾರಸು ಮಾಡಿತ್ತು. ಕರ್ನಾಟಕಕ್ಕೆ ಮಾತ್ರವಲ್ಲ ತೆಲಂಗಾಣ ಮತ್ತು ಮಿಜೋರಾಂಗಳಿಗೂ ತೆರಿಗೆ ಹಂಚಿಕೆಯಲ್ಲಿ ಅನ್ಯಾಯವಾಗಿತ್ತು.

15ನೇ ಹಣಕಾಸು ಆಯೋಗದ ಅಂತಿಮ ವರದಿಯಲ್ಲಿ ಕೂಡ ಕರ್ನಾಟಕಕ್ಕೆ ?6,000 ಕೋಟಿ ಇದರಲ್ಲಿ ರೂ.3,000 ಕೋಟಿ ಜಲಮೂಲಗಳ ಸಂರಕ್ಷಣೆ ಹಾಗೂ ?3,000 ಕೋಟಿ ಬೆಂಗಳೂರಿನ ಫೆರಿಫೆರಲ್ ರಿಂಗ್ ರಸ್ತೆ ನರ್ಮಾಣಕ್ಕೆ ನೀಡುವಂತೆ ಶಿಫಾರಸು ಮಾಡಿತ್ತು. ಇದು ಕೇಂದ್ರ ಸರ್ಕಾರ ವಿಶೇಷ ಪ್ರೀತಿ ಇಲ್ಲವೇ ಔದಾರ್ಯದಿಂದ ಮಾಡಿರುವ ಶಿಫಾರಸುಗಳಲ್ಲ. ಇವೆಲ್ಲವೂ ತೆರಿಗೆ ಹಂಚಿಕೆಯಲ್ಲಿನ ಅನ್ಯಾಯಕ್ಕೆ ನೀಡಿರುವ ಪರಿಹಾರ ಅಷ್ಟೆ.

ಆದರೆ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷದ ಸರ್ಕಾರ ಇದೆ ಎನ್ನುವ ಏಕೈಕ ಕಾರಣಕ್ಕೆ ಈ ಎರಡೂ ಶಿಫಾರಸುಗಳನ್ನು ವಿತ್ತ ಸಚಿವರಾದ ನರ್ಮಲಾ ಸೀತಾರಾಮನ್ ಅವರು ತಿರಸ್ಕರಿಸಿದ್ದಾರೆ. ಈ ಮೂಲಕ ಕರ್ನಾಟಕಕ್ಕೆ ನ್ಯಾಯಯುತ ಪಾಲಿನ ಹಕ್ಕಿನಂದ ವಂಚಿತರನ್ನಾಗಿಸಿದರು. ಇದು ರಾಜ್ಯದ ಆರುವರೆ ಕೋಟಿ ಕನ್ನಡಿಗರಿಗೆ ಬಗೆದಿರುವ ದ್ರೋಹವಾಗಿದೆ.

ಕಣ್ಣೆದುರೇ ದಾಖಲೆಗಳಿದ್ದರೂ ಸ್ವಲ್ಪವೂ ಅಂಜಿಕೆಯಿಲ್ಲದೆ ಕೇಂದ್ರ ವಿತ್ತ ಸಚಿವರು ಹಸಿ ಹಸಿ ಸುಳ್ಳುಗಳನ್ನು ಹೇಳಿ ಜನರ ದಾರಿ ತಪ್ಪಿಸುವ ಹತಾಶ ಪ್ರಯತ್ನ ನಡೆಸುತ್ತಿದ್ದಾರೆ. ಕನ್ನಡಿಗರ ಎದುರು ಕೇಂದ್ರ ಸರ್ಕಾರದ ಸುಳ್ಳಿನ ಪರದೆ ಕಳಚಿ ಬಿದ್ದು ನಜ ಬಣ್ಣ ಬಯಲಾಗಿ ಬಹಳಾ ಕಾಲ ಆಗಿದೆ. ಇನ್ನಾದರೂ ಸತ್ಯ ಒಪ್ಪಿಕೊಂಡು ಆಗಿರುವ ಅನ್ಯಾಯ ಸರಿಪಡಿಸುವ ಪ್ರಯತ್ನ ಮಾಡುವಂತೆ ವಿನಂತಿಸಿದ್ದಾರೆ.

ಕೇಂದ್ರ ಸಚಿವ ಸಂಪುಟದಲ್ಲಿ ಸಚಿವರಾಗಿರುವ ನರ್ಮಲಾ ಸೀತಾರಾಮನ್ ಅವರು ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವಿನ ಸಂಬಂಧದ ಬಗ್ಗೆ ಈ ರೀತಿಯ ಅಜ್ಞಾನ ಹೊಂದಿರುವುದು ವಿಷಾದನೀಯ ಎಂದು ಮುಖ್ಯಮಂತ್ರಿಗಳು ಪತ್ರಿಕಾ ಪ್ರಕಟಣೆಯಲ್ಲಿ ವಿವರಿಸಿದ್ದಾರೆ.

# ರೈತರನ್ನು ಕಂಡರೆ ಕೈಮುಗಿಯಿರಿ : ಚಂದ್ರಕಾಂತ ಪ್ಯಾಟಿ



ಕಲಕೇರಿ : ಈ ಜಗತ್ತಿನಲ್ಲಿ ಅನ್ನಕ್ಕೆ ಬಹುದೊಡ್ಡ ಬೆಲೆ ಇದೆ, ಈರುವೆ 84 ಕೋಟಿ ಜೀವರಾಶಿಗೂ ಅನ್ನ ನೀಡುವ ಏಕೈಕ ಜೀವಿ ರೈತ, ಆದರೆ ಅನ್ನವನ್ನು ಬೆಳೆಯುವ ಅನ್ನದಾತನ ಪರಿಸ್ಥಿತಿ ಮಾತ್ರ ಒಂದು ಬಿಡಿಕಾಸಿಗೂ ಬೆಲೆ ಇಲ್ಲದಂತಾಗಿದೆ, ಇಂದಿನ ದಿನಮಾನಗಳಲ್ಲಿ ರೈತರಿಗೆ ಹೆಣ್ಣು ಸಿಗದಂತಹ ಪರಿಸ್ಥಿತಿ ಈಗ ನರ್ಮಾಣವಾಗಿದೆ, ಆದರೆ ನಜವಾಗಿಯೂ ಯಾವುದೇ ಫಲಾಪೇಕ್ಷೇ ಇಲ್ಲದೇ, ಯಾವುದೇ ಸಂಬಳ, ಬಹುಮಾನಗಳಿಗೆ ತಲೆ ಕೆಡೆಸಿಕೊಳ್ಳದೇ ದಿನನತ್ಯ ಕಾಯಕ ಮಾಡುವ ಏಕೈಕ ಜೀವಿ ಅನ್ನದಾತ ಎಂದು ಹಿರಿಯರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ದೇವರಹಿಪ್ಪರಗಿ ತಾಲುಕಾ ಉಪಾಧ್ಯಕ್ಷರಾದ ಚಂದ್ರಕಾಂತ ಪ್ಯಾಟಿ ಅವರು ತಮ್ಮ ವಿಶೆಷ ಉಪನ್ಯಾಸದಲ್ಲಿ ಹೇಳಿದರು.

ಸ್ಥಳೀಯ ಗುರುಮರುಳಾರಾಧ್ಯ ಸಂಸ್ಥಾನ ಹಿರೇಮಠದಲ್ಲಿ ನಡೆದ ತಿಂಗಳ ಪರ್ಯಂತ ನಡೆಯುತ್ತಿರುವ ಸಜ್ಜಲಗುಡ್ಡದ ಶರಣಮ್ಮನವರ ಪುರಾಣದ ನಮಿತ್ಯ ಪ್ರತಿ ರವಿವಾರ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಋಷಿ–ಕೃಷಿ ಎಂಭ ವಿಶೇಷ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ದಿನ ಬೆಳಗಾದರೆ ಚಾಚು ತಪ್ಪದೇ ಬೆಳಂಬೆಳಿಗ್ಗೆ ಹೊಲಕ್ಕೆ ಹೋಗುವ ರೈತರನ್ನು ಕಂಡರೆ ತಕ್ಷಣದಲ್ಲಿ ಕೈಮುಗಿಯಿರಿ ಎಂದರು, ಯಾಕೆಂದರೆ ರೈತನ ಪರಿಶ್ರಮ ಇಳಿದ್ದಾಗ ನಮ್ಮೆಲ್ಲರಿಗೂ ಅನ್ನ ಸಿಗುವುದು ಎಂದರು, ಜಿಲ್ಲೆಯ ಎಲ್ಲಾ ಗ್ರಾಮಗಳ ಮನೆ ಮನೆಯಿಂದಲೂ ಗಂಡು ಹೆಣ್ಣು ಪಕ್ಷ ಹಾಗೂ ಜಾತಿಯ ಬೇಧಭಾವ ಮಾಡದೇ ಪ್ರತಿ ಮನೆಯಿಂದಲು ರೈತ ಸಂಘಕ್ಕೆ ಬರಬೇಕು ಎಂದರು.

ಈ ವೇಳೆ ಪುರಾಣಿಕರಾದ ಸಿದ್ದೇಶ್ವರ ಶಾಸ್ತ್ರಿಗಳು ಒಂದು ಘಂಟೆ ಪುರಾಣ ಹೇಳಿದ ನಂತರ ರೈತರ ಬಗ್ಗೆ ಹೇಳಿದರು ಹಾಗೂ ಕೆಸರಟ್ಟಿಯ ಸೋಮಲಿಂಗ ಮಹಾಸ್ವಾಮಿಗಳು ರೈತರಿಗೆ ಭೂಮಿಯೇ ತಾಯಿ, ಮೆಘರಾಜನೆ ತಂದೆ, ಒಕ್ಕಲಿಗ ಒಕ್ಕದಿದ್ದರೆ ಬಿಕ್ಕುವುದು ಜಗವೆಲ್ಲ, ರೈತ ಬದುಕಿದರೆ ಮಾತ್ರ ಜಗತ್ತಿನ ಎಲ್ಲಾ ಮಾನವರು ಬದುಕಲು ಸಾಧ್ಯ, ಮನೆಯಲ್ಲಿ ಬಂಗಾರದ ತಟ್ಟೆ ಇದ್ದರು ಅದರಲ್ಲಿ ಅನ್ನವೆ ಊಟ ಮಾಡಬೇಕು, ರಾಶಿ ರಾಶಿ ಹಣವಿದ್ದರೂ ಅನ್ನವೇ ಊಣಬೆಕು, ಆದ್ದರಿಂದ ಇಂದಿನ ಋಷಿ–ಕೃಷಿ ವಿಷಯ ಅತ್ಯಂತ ಅವಶ್ಯಕವಾದದು, ಇಂದಿನ ಪೀಳಿಗೆಗೆ ರೈತ ಹಾಗೂ ರೈತ ಸಂಕಷ್ಟದ ಬಗ್ಗೆ ತಿಳಿ ಹೇಳಿದಾಗ ಮಾತ್ರ ರೈತನಗೆ ಬೆಲೆ ಸಿಗುವುದು ಎಂದರು.

ಈ ಸಂದರ್ಭದಲ್ಲಿ ತಾಳಿಕೋಟಿ ತಾಲೂಕಾ ಮಹಿಳಾ ಘಟಕದ ಅಧ್ಯಕ್ಷರಾಗಿ ಸುಜಾತಾ ಅವಟಿ ಅವರನ್ನು ಆಯ್ಕೆ ಮಾಡಲಾಯಿತು, ಜೊತೆಗೆ ವಿಮಲಾ ಹಿರೇಮಠ, ಪೂಜಾ ಬಡಿಗೇರ, ಶ್ರೀದೇವಿ ಹಿರೇಮಠ, ಬಸಮ್ಮ ಚಳ್ಳಗಿ, ಶಾಂತಮ್ಮ ಹಿರೇಮಠ, ಕಾಶಿಬಾಯಿ ಬಡಿಗೇರ, ವಿಜಯಲಕ್ಷ್ಮೀ ಬಡಿಗೇರ, ಲಕ್ಷ್ಮೀ ಬಡಿಗೇರ, ಸುನತಾ ಬಡಿಗೇರ, ಶಶಿಕಲಾ ಬಡಿಗೇರ, ಕಸ್ತೂರಬಾಯಿ ಬಡಿಗೇರ ಅವರನ್ನು ಶಾಲು ಹೊದಿಸಿ ರೈತ ಸಂಘಕ್ಕೆ ಬರಮಾಡಿಕೊಳ್ಳಲಾಯಿತು. ಎಲ್ಲರಿಗೂ ಪ.ಪೂ.ಷ.ಬ್ರ ಸಿದ್ಧರಾಮ ಶಿವಾಚಾರ್ಯರೂ ರೈತ ಸಂಘದ ಶಾಲು ಹೊದಿಸಿ ಆರ್ಶಿವದಿಸಿದರು.

ಈ ವೇಳೆ ತಾಳಿಕೋಟಿ ತಾಲುಕಾ ರೈತ ಸಂಘದ ಅಧ್ಯಕ್ಷರಾದ ಶ್ರೀಶೈಲ ನಾಟೀಕಾರ, ಕಲಕೇರಿ ಹೋಬಳಿ ಅಧ್ಯಕ್ಷರಾದ ಮಹಿಬೂಬ ಬಾಷಾ ಮನಗೂಳಿ, ಮುಖಂಡರಾದ ಎಸ್.ಬಿ.ಪಾಟೀಲ, ಆರ್.ಜಿ.ಗುಮಶೆಟ್ಟಿ, ಶಿವಾನಂದ ಸಜ್ಜನ, ಮಲ್ಲಕಾಜಪ್ಪಗೌಡ ಗುಮಶೆಟ್ಟಿ, ಬಿ.ಡಿ.ಗುಮಶೆಟ್ಟಿ, ಶಾಂತಪ್ಪ ಪಟ್ಟಣಶೆಟ್ಟಿ, ಶಾಂತಯ್ಯ ಗಣಾಚಾರಿ, ಶ್ರೀಶೈಲ ಅಡಕಿ, ನಲ್ಲಪ್ಪ ಗುಡಗುಂಟಿ ಸೇರಿದಂತೆ ಗವಾಯಿಗಳಾದ ಕೆರೂಟಗಿಯ ರೇಣುಕರು, ತಬಲಾವಾದಕರಾದ ಮಹಾಂತೇಶ ಕಾಳಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಈ ವೇಳೆ ಶ್ರೀಗಳ ತುಲಾಬಾರ ಸೇವೆ ಕೂಡಾ ಜರುಗಿತು. ನಂತರ ಶ್ರೀಮಠದಲ್ಲಿ ಎಲ್ಲಾ ಭಕ್ತಾಧಿಗಳಿಗೆ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.

# ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಗೆಲ್ಲಲಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ ವಿಶ್ವಾಸ

ಮೈಸೂರು, ಮಾರ್ಚ್: ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುತ್ತದೆ ಎಂಬ ವಿಶ್ವಾಸವಿದ್ದು, ಈ ಬಾರಿ ರಾಜ್ಯದ 20 ಲೋಕಸಭಾ ಕ್ಷೇತ್ರಗಳಲ್ಲಿ ಜಯಗಳಿಸಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು..



ಅವರು ಇಂದು ಮೈಸೂರಿನ ವಿಮಾನ ನಲ್ದಾಣದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

*ಅಭ್ಯರ್ಥಿ ಆಯ್ಕೆಯಲ್ಲಿ ಯಾವುದೇ ಕಗ್ಗಂಟಿಲ್ಲ*

ರಾಜ್ಯದ ಉಳಿದ 4 ಕ್ಷೇತ್ರಗಳಿಗೆ ಅಭ್ಯರ್ಥಿಗಳ ಆಯ್ಕೆಯಾಗುವ ಸಾಧ್ಯತೆ ಇದೆ. ಚಾಮರಾಜನಗರ ಕ್ಷೇತ್ರದ ಅಭ್ಯರ್ಥಿ ಆಯ್ಕೆಗೆ ಯಾವುದೇ ಕಗ್ಗಂಟಿಲ್ಲ. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಈ ಬಾರಿ 20 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ. ನಾವು ಬಿಜೆಪಿ ಪಕ್ಷದವರ ಹಾಗೆ 28 ಕ್ಷೇತ್ರಗಳಲ್ಲಿ ಗೆದ್ದೇ ಗೆಲ್ಲುತ್ತೇವೆ ಎಂಬ ಸುಳ್ಳು ಹೇಳುವುದಿಲ್ಲ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಿಂದ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಮೈಸೂರು , ಚಾಮರಾಜನಗರ ಕ್ಷೇತ್ರವನ್ನೂ ಸೇರಿಸಿದಂತೆ ರಾಜ್ಯದ ಎಲ್ಲಾ 28 ಕ್ಷೇತ್ರಗಳಲ್ಲಿ ಗೆಲುವು ಸಾಧಿಸುವುದನ್ನು ಕಾಂಗ್ರೆಸ್ ಪ್ರತಿಷ್ಠೆಯಾಗಿ ತೆಗೆದುಕೊಳ್ಳಲಿದೆ ಎಂದರು.

*ನಾವು ಬಿಜೆಪಿಯಂತೆ ಸುಳ್ಳು ಹೇಳುವುದಿಲ್ಲ*

ಗ್ಯಾರಂಟಿಯೋಜನೆಗಳು ಕಾಂಗ್ರೆಸ್ ಪಕ್ಷದ ನೆರವಿಗೆ ಬರಲಿದೆಯೇ ಎಂಬ ಪ್ರಶ್ನೆಗೆ ಉತ್ತರಿಸುತ್ತಾ, ನಮ್ಮ ಸರ್ಕಾರ ನುಡಿದಂತೆ ನಡೆದಿದ್ದು, ಜನರಿಗೆ ನೀಡಿದ ಭರವಸೆಗಳನ್ನು ಅಧಿಕಾರಕ್ಕೆ ಬಂದ ಕೂಡಲೇ ಜಾರಿಗೊಳಿಸಲಾಗಿದೆ. ಗ್ಯಾರಂಟಿಗಳಿಗೆ ಈ ವರ್ಷ 36000 ಕೋಟಿ ಹಾಗೂ ಮುಂದಿನ ವರ್ಷ 52009 ಕೋಟಿ ರೂ.ಗಳನ್ನು ವೆಚ್ಚ ಮಾಡಲಿದ್ದೇವೆ. ಬಿಜೆಪಿಯವರಂತೆ ಸುಳ್ಳು ಹೇಳದೇ , ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆಯುತ್ತಿದೆ ಎಂದರು.

*ರಾಜ್ಯದ ಜನ ಕಾಂಗ್ರೆಸ್ ಪಕ್ಷದ ಕೈ ಹಿಡಿಯಲಿದ್ದಾರೆ*

ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಮಾಡಿರುವ ಸಾಧನೆಗಳ ಆಧಾರದ ಮೇಲೆ ಚುನಾವಣೆಯನ್ನು ಎದುರಿಸಲಿದ್ದು, ಜನತೆ ವಿಧಾನಸಭಾ ಚುನಾವಣೆಯಂತೆ ನಮ್ಮ ಪಕ್ಷದ ಕೈ ಹಿಡಿಯಲಿದ್ದಾರೆ. ನುಡಿದಂತೆ ನಡೆದ ಕಾಂಗ್ರೆಸ್ ಪಕ್ಷ ಗೆಲುವು ಸಾಧಿಸುತ್ತದೆ ಎಂಬ ವಿಶ್ವಾಸವಿದೆ ಎಂದರು.

*ಮೋದಿಯವರ ಹುಸಿ ಭರವಸೆ*

ಶಕ್ತಿ ಯೋಜನೆ ಹೊರತುಪಡಿಸಿದರೆ ಯಾವುದೇ ಗ್ಯಾರಂಟಿಗಳು ಜನರಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂಬ ಬಿಜೆಪಿಯವರ ಆರೋಪಕ್ಕೆ ಪ್ರತಿಕ್ರಿಯೆ ನೀಡುತ್ತಾ, ಬಿಜೆಪಿಯವರು ನುಡಿದಂತೆ ನಡೆಯಲಿಲ್ಲ. 2018 ರಲ್ಲಿ ಬಿಜೆಪಿಯವರು ನೀಡಿದ 600 ಭರವಸೆಗಳಲ್ಲಿ ಶೇ. 10 ರಷ್ಟನ್ನೂ ಈಡೇರಿಸಲಿಲ್ಲ. ಪ್ರಧಾನ ಮೋದಿಯವರೂ ಕೂಡ ಜನರ ಖಾತೆಗಳಿಗೆ 15 ಲಕ್ಷ ರೂ.ಗಳಾಗಲಿ, 20 ಕೋಟಿ ಉದ್ಯೋಗವಾಗಲಿ, ರೈತರ ಆದಾಯ ದ್ವಿಗುಣಗೊಳಿಸುವ ಯಾವುದೇ ಭರವಸೆಗಳನ್ನು ಈಡೇರಿಸಲಿಲ್ಲ. ಅಚ್ಛೇ ದಿನ್ ತರುವ ಭರವಸೆಯನ್ನು ಹುಸಿಗೊಳಿಸಿದ ಮೋದಿಯವರನ್ನು ಜನರು ಯಾಕೆ ನಂಬುತ್ತಾರೆ ಎಂದು ಸಿಎಂ ಪ್ರಶ್ನಿಸಿದರು.

*ಜನರ ಅಭಿಪ್ರಾಯಕ್ಕೆ ಮನ್ನಣೆ*

ಕುಟುಂಬ ರಾಜಕಾರಣವನ್ನು ವಿರೋಧಿಸುವ ಮುಖ್ಯಮಂತ್ರಿಗಳೇ ತಮ್ಮ ಸಚಿವರ ಕುಟುಂಬದವರಿಗೆ ಈ ಬಾರಿ ಟಿಕೆಟ್ ನೀಡಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡುತ್ತಾ, ಇದು ಕುಟುಂಬ ರಾಜಕಾರಣವಲ್ಲ. ಜನರು ಯಾವ ಅಭ್ಯರ್ಥಿಗೆ ಬೆಂಬಲ ಸೂಚಿಸಬಹುದೆಂಬ ಚಿಂತನೆಯ ಮೇಲೆ ಅವರನ್ನು ಆಯ್ಕೆ ಮಾಡಲಾಗಿದ್ದು, ಜನರ ಅಭಿಪ್ರಾಯಕ್ಕೆ ಮನ್ನಣೆ ನೀಡಲಾಗಿದೆ ಎಂದರು.